# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 308 |
| ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 19-07-2024 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರೈತ ಸಂಪರ್ಕ ಕೇಂದ್ರಗಳಲ್ಲಿ ಸಂಗ್ರಹವಾಗುವ ಸೇವಾ ಶುಲ್ಕವನ್ನು ಸರ್ಕಾರಕ್ಕೆ ಜಮೆ ಮಾಡದೇ ಭ್ರಷ್ಟಚಾರವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಭ್ರಷ್ಟಚಾರವೆಸಗಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; ಇವರುಗಳ ವಿರುದ್ಧ ಕ್ರಿಮಿನಲ್ ಕೇಸು ದಾಖಲು ಮಾಡಲಾಗಿದೆಯೇ; | ರೈತ ಸಂಪರ್ಕ ಕೇಂದ್ರಗಳಲ್ಲಿ ಸಂಗ್ರಹವಾಗುವ ಸೇವಾ ಶುಲ್ಕದಲ್ಲಿ ಯಾವುದೇ ಭ್ರಷ್ಟಚಾರವಾಗಿರುವುದಿಲ್ಲ.<br>ಸರ್ಕಾರದ ಆದೇಶ ಸಂಖ್ಯೆ: ಕೃತೋಇ /116 /ಕೃಯೋಕಾ/ 2001, ದಿನಾಂಕ:17.05.2001 ಮತ್ತು ಕೃಇ/ 113/ ಕೃಇಕ /2012 ದಿನಾಂಕ: 18.03.2013 ಗಳಲ್ಲಿನ ಆದೇಶಗಳಂತೆ ರೈತ ಸಂಪರ್ಕ ಕೇಂದ್ರಗಳ ನಿರ್ವಹಣೆಗಾಗಿಯೇ ಅಂದರೆ ದುರಸ್ಥಿ, ಸ್ವಚ್ಚತೆ ಇತರೆ ವೆಚ್ಚ ಭರಿಸಲು ಸೇವಾ ಶುಲ್ಕವನ್ನು ಸಂಗ್ರಹಿಸಲಾಗುತ್ತಿರುವುದರಿಂದ ಸರ್ಕಾರಕ್ಕೆ ಜಮೆ ಮಾಡಿರುವುದಿಲ್ಲ. |
| ಆ | ಬಡ ರೈತರಿಗೆ ಪರಿಹಾರ ವಿತರಣೆಯಲ್ಲಿಯೂ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು; | ಚಿಕ್ಕಮಗಳೂರು ಜಿಲ್ಲೆ, ಕಡೂರು ತಾಲ್ಲೂಕು, ಕಲ್ಕೆರೆ ಗ್ರಾಮ ಪಂಚಾಯಿತಿಯಲ್ಲಿ 2022-23ನೇ ಸಾಲಿನ ಬೆಳೆ ಪರಿಹಾರ ಹಣವನ್ನು ನಕಲಿ ಬ್ಯಾಂಕ್ ಖಾತೆ, ಆಧಾರ್ ಕಾರ್ಡ್ ಆಧರಿಸಿ ಹಣ ಪಾವತಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಉಪವಿಭಾಗಾಧಿಕಾರಿ, ತರೀಕೆರೆ ಉಪವಿಭಾಗ ಹಾಗೂ ಜಂಟಿ ನಿರ್ದೇಶಕರು, ಕೃಷಿ ಇಲಾಖೆ, ಚಿಕ್ಕಮಗಳೂರು ಜಿಲ್ಲೆ ಇವರ ನೇತೃತ್ವದಲ್ಲಿ ಜಂಟಿಯಾಗಿ ತನಿಖೆ ಕೈಗೊಂಡ ಪ್ರಥಮ ವರದಿ ಸಲ್ಲಿಕೆಯಾಗಿದ್ದು, ಪ್ರಕರಣದ ಪೂರ್ಣ ತನಿಖಾ ವರದಿಯನ್ನು ಹಾಗೂ ಈ ಪ್ರಕರಣದಲ್ಲಿ ಭಾಗಿಯಾಗಿರುವ ಇತರೆ ಇಲಾಖೆಯ ಅಧಿಕಾರಿಗಳನ್ನು ಸಹ ಗುರುತಿಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ, ಚಿಕ್ಕಮಗಳೂರು ಇವರಿಗೆ ತಿಳಿಸಲಾಗಿರುತ್ತದೆ.<br>ಪ್ರಕರಣದಲ್ಲಿ ಅಕ್ರಮವಾಗಿ ಬೆಳೆ ಪರಿಹಾರ ಮೊತ್ತವನ್ನು ಅನ್ಯ ಖಾತೆದಾರರಿಗೆ ಪಾವತಿಸಲು ಕ್ರಮವಹಿಸಿರುವ ಶ್ರೀ ಪಾಲಾಕ್ಷಮೂರ್ತಿ, ಗ್ರಾಮ ಆಡಳಿತ ಅಧಿಕಾರಿ, ಕಡೂರು ತಾಲ್ಲೂಕು ಇವರನ್ನು ಕರ್ತವ್ಯದಿಂದ ಅಮಾನತುಗೊಳಿಸಿ, ಸಕ್ಷಮ |
| ಇ | ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕಿನ ಚೌಳ ಹಿರಿಯೂರು ಹೋಬಳಿಯ ಕಲ್ಕೆರೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 6 ಕೋಟಿಗೂ ಹೆಚ್ಚು ಮೊತ್ತದ ಅವ್ಯವಹಾರವಾಗಿದ್ದು, ಇದ್ದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ? (ವಿವರ ನೀಡುವುದು) | |

ಪ್ರಾಧಿಕಾರವಾದ ಚಿಕ್ಕಮಗಳೂರು ಜಿಲ್ಲಾಧಿಕಾರಿ ಶಿಸ್ತು ಕ್ರಮ ಪ್ರಾರಂಭಿಸಿರುತ್ತಾರೆ ಹಾಗೂ ಸದರಿ ನೌಕರರ ವಿರುದ್ಧ ಅಜ್ಜಂಪುರ ಪೊಲೀಸ್ ಠಾಣೆಯಲ್ಲಿ ಮೊ.ಸಂ: 26/2024ರಂತೆ ಕಲಂ 468, 471, 420, 409 ಐ.ಪಿ.ಸಿ ರಡಿ ಪ್ರಕರಣ ದಾಖಲಿಸಲಾಗಿರುತ್ತದೆ.

ಈ ಹಿಂದೆ ಕಡೂರು ತಾಲ್ಲೂಕಿನ ತಹಶೀಲ್ದಾರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಉಮೇಶ್.ಜಿ ಇವರು ಸಹ 07 ಅನರ್ಹ ಫಲಾನುಭವಿಗಳಿಗೆ ಬೆಳೆಹಾನಿ ಪರಿಹಾರ ಮೊತ್ತವನ್ನು ಪಾವತಿಸಿರುತ್ತಾರೆಂದು ಜಿಲ್ಲಾಧಿಕಾರಿ ರವರು ನೀಡಿರುವ ಅಂತಿಮ ವರದಿಯಲ್ಲಿ ತಿಳಿಸಿರುತ್ತಾರೆ. ಅವರ ವಿರುದ್ಧವೂ ಪ್ರಕರಣವನ್ನು ದಾಖಲಿಸಿ ಮತ್ತು ಶಿಸ್ತುಕ್ರಮ ಪ್ರಾರಂಭಿಸಲು ಸಕ್ಷಮ ಪ್ರಾಧಿಕಾರಕ್ಕೆ ಕ್ರಮವಹಿಸಲಾಗುವುದು.

ಸಂಖ್ಯೆ: AGRI/151/ACT/2024

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು